<u>ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ. ನ್ಯಾಯಲಯ ,</u>

<u>ಶ್ರೀರಂಗಪಟ್ಟಣ</u>

<u>ಸಿ.ಸಿ.5/2023</u>

| | |
|---|---|
| ಸಿ.ಡಬ್ಲ್ಯೂ : | 2 |
| ಪಿ.ಡಬ್ಲ್ಯೂ : | 2 |

| | | |
|---|---|---|
| ಸಾಕ್ಷಿದಾರರ ಹೆಸರು | : | ಯೋಗೆಗೌಡ |
| ತಂದೆ/ ಪತಿಯ ಹೆಸರು | : | ನಿಂಗೇಗೌಡ |
| ವಯಸ್ಸು | : | 67 ವರ್ಷ |
| ವೃತ್ತಿ | : | ಖಾಸಗಿ ಕೆಲಸ |
| ವಾಸ | : | ಪಂಪ್ ಹೌಸ್ |

**<u>ಸಾಕ್ಷಿಗೆ ಪ್ರಮಾಣ ವಚನ ಮಾಡಿಸಿದ ದಿನಾಂಕ: 04.02.2026</u>**

**<u>ಮುಖ್ಯ ವಿಚಾರಣೆ: ಮಾನ್ಯ ಎ ಪಿ ಪಿ ರವರಿಂದ</u>**

ಚಾಸಾ.1 ನನ್ನ ಮಗಳು. ಚಾಸಾ.3 ನನ್ನ ಹೆಂಡತಿ ಇರುತ್ತಾರೆ. ನನಗೆ ಚಾಸಾ.4 ರಿಂದ 7 ರವರ ಪರಿಚಯ ಇರುವುದಿಲ್ಲ. ನನಗೆ ಈ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇರುವುದಿಲ್ಲ. ನಾನು ಪೊಲೀಸರ ಮುಂದೆ ಯಾವುದೇ ಹೇಳಿಕೆ ನೀಡಿರುವುದಿಲ್ಲ.

(ಈ ಹಂತದಲ್ಲಿ ಮಾನ್ಯ ಸ.ಸ.ಅ. ಅವರು ಸದರಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ನೀಡುವಂತೆ ಕೋರಿಕೊಂಡಿದ್ದು, ಆಲಿಸಿ ಅನುಮತಿ ನೀಡಲಾಯಿತು)

<u>ಪಾಟಿ ಸವಾಲುಃ ಮಾನ್ಯ ಸ.ಸ.ಅ ರವರಿಂದ</u>

ದಿಃ 16.11.2022 ರಂದು ಬೆಳಗ್ಗೆ 8 ಗಂಟೆ ಸಮಯದಲ್ಲಿ ಚಾಸಾ.1 ರವರು ಮೈಸೂರಿಗೆ ಹೋಗಲೆಂದು ನಮ್ಮ ಮನೆಯ ಬೀರುವಿನಲ್ಲಿ ಇಟ್ಟಿದ್ದ ಒಡವೆಗಳನ್ನು ತೆಗೆದುಕೊಳ್ಳಲು ಹೋದಾಗ ಅವುಗಳು ಅಲ್ಲಿ ಇರಲಿಲ್ಲ. ನಾವು ಪ್ರವಾಸಕ್ಕೆ ಹೋಗಿದ್ದ ಸಮಯದಲ್ಲಿ ನಮ್ಮ ಮನೆಯಲ್ಲಿ ಕಳ್ಳತನ ಆಗಿರುತ್ತದೆ ಎಂದು ನನಗೆ ತಿಳಿದು ಬಂದಿರುತ್ತದೆ ಎಂದರೆ ನನಗೆ ಗೊತ್ತಿಲ್ಲ. ಆರೋಪಿಯೇ ಈ ಕಳ್ಳತನ ಮಾಡಿರುತ್ತಾರೆ ಎಂದರೆ ನನಗೆ ಗೊತ್ತಿಲ್ಲ. ಈ ಘಟನೆ ಸಂಬಂಧ ನಾನು ಪೊಲೀಸರ ಮುಂದೆ ಹೇಳಿಕೆಯನ್ನು ನೀಡಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿಯು ಹೇಳಿಕೆ ನೀಡಿಲ್ಲ ಎಂದು ತಿಳಿಸಿದ್ದರಿಂದ ಸಾಕ್ಷಿಯ ಹೇಳಿಕೆಯನ್ನು ಅಭಿಯೋಜನೆಯ ಪರವಾಗಿ ನಿಪಿ.4 ಎಂದು , ಅದರಲ್ಲಿರುವ ಆಯ್ದ ಭಾಗವನ್ನು ನಿಪಿ.4(ಎ) ಎಂದು ಗುರುತಿಸಲಾಯಿತು. ನನಗೆ ಈ ಪ್ರಕರಣದ ಬಗ್ಗೆ ಎಲ್ಲಾ ಮಾಹಿತಿ ಇದ್ದರು ಆರೋಪಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

<u>ಪಾಟೀಸವಾಲು ಃ ಆರೋಪಿ ಪರ ವಕೀಲರಿಂದ</u>

ಆರೋಪಿ ಪರ ವಕೀಲರು ಪಾಟೀಸವಾಲು ಇಲ್ಲಎಂದು ತಿಳಿಸಿದ್ದರಿಂದ ಪಾಟೀಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

ಮರು ವಿಚಾರಣೆ ಇಲ್ಲ.

ನನ್ನ ಉಕ್ತಲೇಖನವನ್ನು ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.

ಸಾ.ಓ.ಹೇ.ಸ.ಒ

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆಎಂಎಫ್‌ಸಿ., ಶ್ರೀರಂಗಪಟ್ಟಣ.